# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

## ಮುಕ್ತಗಂಗೋತ್ರಿ, ಮೈಸೂರು-570006

ದಿನಾಂಕ 13.03.2019 ರಂದು ಮಧ್ಯಾಹ್ನ 02.30 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಭಾಂಗಣದಲ್ಲಿ ಮಾನ್ಯ ಕುಲಪತಿಗಳಾದ ಪ್ರೊ. ಡಿ.ಶಿವಲಿಂಗಯ್ಯ ರವರ ಅಧ್ಯಕ್ಷತೆಯಲ್ಲಿ ನಡೆದ 8ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡವಳಿ.

| ಉಪಸ್ಥಿತರು | |
|---|---|
| **ಪ್ರೊ. ಡಿ. ಶಿವಲಿಂಗಯ್ಯ**<br>ಮಾನ್ಯ ಕುಲಪತಿಗಳು ಹಾಗೂ<br>ಶೈಕ್ಷಣಿಕ ಮಂಡಳಿಯ ಅಧ್ಯಕ್ಷರು,<br>ಕರಾಮುವಿ, ಮೈಸೂರು. | **ಪ್ರೊ. ರಮೇಶ್. ಬಿ**<br>ಕುಲಸಚಿವರು<br>ಕರಾಮುವಿ,<br>ಮೈಸೂರು. |
| **ಪ್ರೊ. ಜಗದೀಶ**<br>ಡೀನ್ (ಶೈಕ್ಷಣಿಕ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ಪ್ರೊ. ಡಿ.ಬಿ. ಬಸವರಾಜ್**<br>ಡೀನ್ (ಅಧ್ಯಯನ ಕೇಂದ್ರಗಳು) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಡಾ. ಎಂ.ಎಸ್. ರಮಾನಂದ**<br>ಕುಲಸಚಿವ (ಪರೀಕ್ಷಾಂಗ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. |
| **ವಿಶೇಷ ಆಹ್ವಾನಿತರು** | |
| **ಡಾ. ಪ್ರಕಾಶ್,**<br>ನಿರ್ದೇಶಕರು – ಐ.ಟಿ. | **ಡಾ. ಸೆಲ್ವಪಿಳ್ಳೆ ಅಯ್ಯಂಗಾರ್,**<br>ನಿರ್ದೇಶಕರು (ಪ್ರವೇಶಾತಿ) |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಪತಿಗಳು ಮಾತನಾಡುತ್ತಾ ಶೈಕ್ಷಣಿಕ ಮಂಡಳಿ ಸಭೆಯನ್ನು ಕರೆದಿರುವ ಉದ್ದೇಶವನ್ನು ಸದಸ್ಯರುಗಳ ಗಮನಕ್ಕೆ ತಂದರು.

13/3 ಕುಲಸಚಿವರು

ಕುಲಪತಿಗಳು 13/3

ವಿಷಯ ಸಂಖ್ಯೆ : ೦೮:೦೧

ವಿಷಯ : ಸಹಭಾಗಿತ್ವ ಸಂಸ್ಥೆಗಳ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದಿಂದ ನೀಡಲಾಗಿರುವ ಅಂಕಪಟ್ಟಿಗಳ ನೈಜತೆ ಮತ್ತು ಪ್ರತಿಲಿಪಿ ಕೋರಿ ಬರುವ ವಿದ್ಯಾರ್ಥಿಗಳಿಗೆ ಪ್ರವೇಶಾತಿ ವಿಭಾಗದಿಂದ ಲಭ್ಯವಾಗದೆ ಇರುವ ಬಗೆಗೆ.

*****

ದಿನಾಂಕ: 07.09.2018ರಂದು ನಡೆದ ವ್ಯವಸ್ಥಾಪನಾ ಮಂಡಳಿಯ 151ನೇ ಸಭೆಯ ತೀರ್ಮಾನದಂತೆ (ವಿ.ಸಂ.151.21) ಆದೇಶ ಸಂಖ್ಯೆ ಕರಾಮುವಿ/ಆರ್‌ಪಿಎ/56/18-19, ದಿನಾಂಕ: 26.10.2018ರನ್ವಯ ವಿಶ್ವವಿದ್ಯಾನಿಲಯದೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಸಹಭಾಗಿತ್ವ ಸಂಸ್ಥೆಯಗಳಿಂದ ಪ್ರವೇಶಾತಿ ಹೊಂದಿರುವ ವಿದ್ಯಾರ್ಥಿಗಳು ಪರೀಕ್ಷೆ ಬರೆದು ಸದರಿ ಸಂಸ್ಥೆಯವರು ಸಲ್ಲಿಸಿರುವ ದಾಖಲೆಗಳನುಸಾರ ಅಂಕಪಟ್ಟಿಯನ್ನು ವಿಶ್ವವಿದ್ಯಾನಿಲಯದಿಂದ ಈಗಾಗಲೇ ವಿತರಿಸಲಾಗಿರುವ ಅಂಕಪಟ್ಟಿಗಳನ್ನು ಹಾಗೂ ಪದವಿ ಪ್ರಮಾಣ ಪತ್ರಗಳನ್ನು ಪಡೆದಿರುವ ವಿದ್ಯಾರ್ಥಿಗಳು ಮುಂದಿನ ವ್ಯಾಸಂಗಕ್ಕಾಗಿ, ಉದ್ಯೋಗಕ್ಕಾಗಿ ಹಾಗೂ ಮುಂಬಡ್ತಿ ವಿಷಯಕ್ಕೆ ಸಂಬಂಧಿಸಿದಂತೆ ನೈಜತೆ ಪ್ರಮಾಣ ಪತ್ರ ಮತ್ತು ಪ್ರತಿಲಿಪಿ ಕೋರಿ ಹಲವಾರು ಪತ್ರಗಳು ಪರೀಕ್ಷಾ ವಿಭಾಗಕ್ಕೆ ಬರುತ್ತಿದೆ.

ಸದರಿ ವಿದ್ಯಾರ್ಥಿಗಳಿಂದ ಬಂದಂತಹ ಅರ್ಜಿಗಳನ್ನು ಪರಿಶೀಲನಾ ಹಂತದಲ್ಲಿ ವಿದ್ಯಾರ್ಥಿಯು ಪ್ರವೇಶಾತಿ ಪಡೆದಿರುವ ಬಗೆಗೆ ಪರೀಕ್ಷಾ ವಿಭಾಗದಿಂದ ಪ್ರವೇಶಾತಿ ವಿಭಾಗಕ್ಕೆ ಕಡತದ ಮುಖಾಂತರ ಪ್ರವೇಶಾತಿ ಅನುಮೋದನಾ ಪಟ್ಟಿಯನ್ನು ಕೋರಲಾಗುತ್ತದೆ. ಈ ಸಂದರ್ಭದಲ್ಲಿ ಪ್ರವೇಶಾತಿ ವಿಭಾಗದ ನಿರ್ದೇಶಕರು ಪ್ರವೇಶಾತಿ ವಿಭಾಗದಲ್ಲಿ ಶೋಧಿಸಿದ್ದು, ಪ್ರವೇಶಾತಿ ಪಡೆದ ಬಗ್ಗೆ ದಾಖಲೆಗಳು ಲಭ್ಯವಿರುವುದಿಲ್ಲವೆಂದು ದಿನಾಂಕ: 13.03.2019ರಂದು ವಿಇಟಿ ಕಡತದಲ್ಲಿ (ಕಡತ ಸಂಖ್ಯೆ ಕರಾಮುವಿ/ಪವಿ/ವಿಇಟಿ/18-19, ಕಡತ ಸಂಖ್ಯೆ 05) ಅಭಿಪ್ರಾಯವನ್ನು ವ್ಯಕ್ತ ಪಡಿಸಿರುವ ಹಿನ್ನಲೆಯಲ್ಲಿ ಪ್ರಸ್ತುತ ವಿಷಯವನ್ನು ಶೈಕ್ಷಣಿಕ ಮಂಡಳಿಯ ಸಭೆಗೆ ಚರ್ಚೆ ಮತ್ತು ನಿರ್ಣಯಕ್ಕಾಗಿ ಮಂಡಿಸಿದೆ.

ಸದರಿ ವಿಷಯದ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು.

ತೀರ್ಮಾನ : ಕರಾಮುವಿಯ ಇನ್‌ಹೌಸ್ ಮತ್ತು ಸಹಭಾಗಿತ್ವ ಕೋರ್ಸ್‌ಗಳ ವಿದ್ಯಾರ್ಥಿಗಳು 2012-13ನೇ ಸಾಲಿನವರೆಗೆ ಸಂಬಂಧಪಟ್ಟ ಕೋರ್ಸ್‌ಗಳ ಪರೀಕ್ಷೆಯಲ್ಲಿ ತೇರ್ಗಡೆಯಾಗಿ, ಅಂತಹ ವಿದ್ಯಾರ್ಥಿಗಳು ಅಂಕಪಟ್ಟಿ ಮುದ್ರಣ / ತಿದ್ದುಪಡಿ, ನೈಜತೆಯ ಪ್ರಮಾಣಪತ್ರ, ತಾತ್ಕಾಲಿಕ ತೇರ್ಗಡೆ ಪತ್ರ, ವಲಸೆ ಪತ್ರ ಮತ್ತು ಪ್ರತಿಲಿಪಿಗಳಿಗಾಗಿ ಮನವಿ ಸಲ್ಲಿಸಿದ್ದರೆ, ಅಂತಹ ಮನವಿಗಳನ್ನು ಪರೀಕ್ಷಾ ವಿಭಾಗದಲ್ಲಿ ಲಭ್ಯವಿರುವ ತಃಖ್ತೀಕರಣದ ಅಂಕಗಳ ವಹಿ (Tabulation Ledger) ದಾಖಲೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ವಹಿಸುವಂತೆ ನಿರ್ಣಯಿಸಿತು.

-----

ಅಂತಿಮವಾಗಿ 8ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ ಮಂಡಿತ ವಿಷಯಗಳ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸೂಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲ ಸದಸ್ಯರುಗಳಿಗೂ ಮಾನ್ಯ ಕುಲಪತಿಗಳು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

13/3

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

ಕುಲಪತಿಗಳು ಹಾಗೂ ಅಧ್ಯಕ್ಷರು 13/3